ಜಿಲ್ಲಾಧಿಕಾರಿಗಳ ಕಾರ್ಯಾಲಯ, ಉತ್ತರ ಕನ್ನಡ, ಕಾರವಾರ – 581 301

OFFICE OF THE DEPUTY COMMISSIONER, UTTARA KANNADA DISTRICT, KARWAR, -581 301

ದೂರವಾಣಿ: (08382) 226406/226471/222071, ಫ್ಯಾಕ್ಸ್: 226603/222072 Email: dckarwar@gmail.com

ಸಂ. ಡಿಸಿಬಿ/ಎಂಎಜಿ/ಇತರ/ವಿವ-401/2019-20 21-03-2020

ವಿಷಯ: ಉತ್ತರ ಕನ್ನಡ ಜಿಲ್ಲೆಯಲ್ಲಿ ಕೋವಿಡ್-19 ಎಂಬ ಅಪಾಯಕಾರಿ ಸಾಂಕ್ರಾಮಿಕ ರೋಗ ಹರಡದಂತೆ ಸೂಕ್ತ ಮುಂಜಾಗೃತ ಕ್ರಮ ವಹಿಸಲು ನಿಷೇಧಾಜ್ಞೆ ಜಾರಿ ಮಾಡುವ ಕುರಿತು.

ಉಲ್ಲೇಖ: 1. ಸಾಂಕ್ರಮಿಕ ರೋಗ ಕಾಯ್ದೆ 1897

2. ಕರ್ನಾಟಕ ಸರಕಾರದ ಅಧಿಸೂಚನೆ ಸಂಖ್ಯೆ ಹೆಚ್ ಎಫ್ ಡಬ್ಲ್ಯೂ / 54/ ಸಿಜಿಎಂ/2020 ದಿನಾಂಕ: 11-3-2020.

3. ಸಿ.ಆರ್.ಪಿ.ಸಿ. ಸೆಕ್ಷನ್ 144

*****

**ಪ್ರಸ್ತಾವನೆ :**

ದೇಶದಲ್ಲಿ ಮತ್ತು ರಾಜ್ಯದಲ್ಲಿ ಕೋವಿಡ್-19 ವೈರಾಣುಗಳಿಂದ ಸೋಂಕಿತರಾದವರ ಸಂಖ್ಯೆ ದಿನದಿಂದ ದಿನಕ್ಕೆ ವೃಧ್ಧಿಸುತ್ತಿದೆ. ಉತ್ತರ ಕನ್ನಡ ಜಿಲ್ಲೆಯ ನಾಗರಿಕರಿಗೆ ನಿಗದಿತ ಸಾಮಾಜಿಕ ಅಂತರ ಕಾಯ್ದುಕೊಳ್ಳಲು, ಗುಂಪು ಸೇರುವುದನ್ನು ತಡೆಗಟ್ಟಲು, ಸಮಾರಂಭ, ಸಾಮೂಹಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸದಿರಲು ದಿನಪತ್ರಿಕೆ ಮತ್ತು ಇನ್ನಿತರೇ ಮಾಧ್ಯಮಗಳ ಮೂಲಕ ಸಾಕಷ್ಟು ಸೂಚನೆ ತಿಳುವಳಿಕೆ ನೀಡಿದ್ದಾಗಿಯೂ ಸಹ ಅವರು ಸಕಾರತ್ಮಕವಾಗಿ ಸ್ಪಂಧಿಸುತ್ತಿಲ್ಲವೆಂದು ತಹಶೀಲ್ದಾರರು, ಸಹಾಯಕ ಆಯುಕ್ತರು ಮತ್ತು ಪೋಲಿಸ್ ಅಧಿಕಾರಿಗಳು ತಿಳಿಸಿರುತ್ತಾರೆ. ವಿದೇಶದಿಂದ ಆಗಮಿಸುತ್ತಿರುವ ಸ್ಥಳೀಯ ನಿವಾಸಿಗಳ ಸಂಖ್ಯೆಯೂ ಸಹ ಹೆಚ್ಚಾಗುತ್ತಿದ್ದು, ಸಾರ್ವಜನಿಕರು ಗುಂಪುಗಳಲ್ಲಿ ಓಡಾಡುವುದು, ಸಮೂಹ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಕಂಡುಬಂದಿದ್ದು, ಈ ಪರಿಸ್ಥಿತಿ ಹೀಗೆಯೇ ಮುಂದುವರೆದಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲೂ ಸಹ ಪರಿಸ್ಥಿತಿ ನಿಯಂತ್ರಣ ಮೀರುವ ಸಂಭವವಿರುತ್ತದೆ.

ಆದ್ದರಿಂದ ಉತ್ತರ ಕನ್ನಡ ಜಿಲ್ಲೆಯಾದ್ಯಂತ ಕೋವಿಡ್-19 ವೈರಾಣುವಿನ ಸೋಂಕು ಪಸರಿಸಲು ಪೂರಕವಾಗುವಂತೆ 05 ಮತ್ತು ಅದಕ್ಕಿಂತ ಹೆಚ್ಚು ಜನರು ಗುಂಪು ಸೇರುವುದು, ಓಡಾಡುವುದು ಅಥವಾ ಇನ್ನಿತರೇ ಯಾವುದೇ ಚಟುವಟಿಕೆಗಳಲ್ಲಿ ಭಾಗವಹಿಸುವುದನ್ನು ತಡೆಯಲು ದಂಡ ಪ್ರಕ್ರಿಯಾ ಸಂಹಿತೆ ಕಲಂ 144 ರನ್ವಯ ನಿಷೇದಾಜ್ಞೆ ಜ್ಯಾರಿಗೊಳಿಸುವುದು ಸೂಕ್ತವೆಂದು ಮನಗಂಡು ಮುನ್ನೆಚ್ಚರಿಕೆ ಕ್ರಮವಾಗಿ ಈ ಕೆಳಗಿನಂತೆ ಆದೇಶಿಸಲಾಗಿದೆ.

**ಆದೇಶ : -**

ಈ ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳಿಂದ ದಂಡ ಪ್ರಕ್ರಿಯಾ ಸಂಹಿತೆ ಕಲಂ 144 ರನ್ವಯ ಪ್ರದತ್ತವಾದ ಅಧಿಕಾರದ ಮೇರೆಗೆ ಡಾ. ಹರೀಶ್ ಕುಮಾರ್ ಕೆ. ಭಾ.ಆ.ಸೇ. ಜಿಲ್ಲಾ ದಂಡಾಧಿಕಾರಿ ಉತ್ತರ ಕನ್ನಡ ಜಿಲ್ಲೆ ಆದ ನಾನು ಉತ್ತರ ಕನ್ನಡ ಜಿಲ್ಲೆಯಾದ್ಯಂತ ದಿನಾಂಕ: 24-03-2020 ರ ಮುಂಜಾನೆ 06-00 ಗಂಟೆಯಿಂದ 30-03-2020 ರ ಮಧ್ಯರಾತ್ರಿ 12-00 ಗಂಟೆಯವರೆಗೆ 05 ಮತ್ತು ಅದಕ್ಕಿಂತ ಹೆಚ್ಚು ಜನರು ಗುಂಪು ಸೇರುವುದು, ಓಡಾಡುವುದು ಅಥವಾ ಇನ್ನಿತರೇ ಯಾವುದೇ ಚಟುವಟಿಕೆಗಳಲ್ಲಿ ಭಾಗವಹಿಸುವುದನ್ನು ನಿಷೇಧಿಸಿ ಆದೇಶಿಸುತ್ತೇನೆ.

ಈ ಆದೇಶವನ್ನು ಪೊಲೀಸ್ ಅಧೀಕ್ಷಕರು, ಉತ್ತರ ಕನ್ನಡ ಕಾರವಾರ ರವರು ಕಟ್ಟುನಿಟ್ಟಾಗಿ ಜ್ಯಾರಿಯಲ್ಲಿ ತರುವ ಬಗ್ಗೆ ಕ್ರಮ ಜರುಗಿಸತಕ್ಕದ್ದು ಹಾಗೂ ಆದೇಶದ ಅನುಷ್ಠಾನಕ್ಕೆ ಇತರೇ ಯಾವುದೇ ಇಲಾಖೆಯ ಅಧಿಕಾರಿ/ಸಿಬ್ಬಂದಿಗಳ ಸೇವೆ ಅಗತ್ಯವಿದ್ದಲ್ಲಿ ಅವರ ಸೇವೆಯನ್ನು ಪಡೆದುಕೊಳ್ಳಲು ಆರಕ್ಷಕ ಇಲಾಖೆಗೆ ಅನುಮತಿ ನೀಡಿದೆ.

Scanned with CamScanner

ತಾಲೂಕಾ ದಂಡಾಧಿಕಾರಿಗಳು ಮತ್ತು ಉಪವಿಭಾಗದ ದಂಡಾಧಿಕಾರಿಗಳು ಈ ಆದೇಶವನ್ನು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಆರಕ್ಷಕ ಇಲಾಖೆಗೆ ಅಗತ್ಯ ಸಹಕಾರ ನೀಡಲು ಮತ್ತು ಯಾವುದೇ ರೀತಿಯಲ್ಲಿ ಆದೇಶದ ಉಲ್ಲಂಘನೆಯಾದಲ್ಲಿ ತಕ್ಷಣವೇ ಅಪಾಧಿತರ ವಿರುದ್ಧ ಕ್ರಮ ಜರುಗಿಸಲು ಬದ್ಧರಿರುತ್ತಾರೆ.

ಜಿಲ್ಲಾ ದಂಡಾಧಿಕಾರಿ, ಉ.ಕ.
District Magistrate, Uttara Kannada

ಜಿಲ್ಲಾ ದಂಡಾಧಿಕಾರಿ,
ಉತ್ತರ ಕನ್ನಡ, ಕಾರವಾರ.

ಪ್ರತಿ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ

1. ಪೋಲಿಸ್ ಅಧೀಕ್ಷಕರು, ಉತ್ತರ ಕನ್ನಡ, ಕಾರವಾರ
2. ಜಿಲ್ಲೆಯ ಎಲ್ಲಾ ಉಪ ವಿಭಾಗೀಯ ದಂಡಾಧಿಕಾರಿಗಳು ಮತ್ತು ತಾಲೂಕಾ ಕಾರ್ಯನಿರ್ವಾಹಕ ದಂಡಾಧಿಕಾರಿಗಳು
3. ಜಿಲ್ಲೆಯ ಎಲ್ಲಾ ಇಲಾಖಾ ಮುಖ್ಯಸ್ಥರಿಗೆ
4. ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕಾರವಾರ ರವರಿಗೆ

2/- ಈ ವಿಷಯವನ್ನು ಸರ್ಕಾರಕ್ಕೆ ವೆಚ್ಚ ಬಾರದ ರೀತಿಯಲ್ಲಿ ಸುದ್ದಿ ಮಾಧ್ಯಮಗಳಲ್ಲಿ ಪ್ರಕಟಿಸಲು ಸೂಚಿಸಿದೆ.

ಜಿಲ್ಲಾ ದಂಡಾಧಿಕಾರಿ,
ಉತ್ತರ ಕನ್ನಡ, ಕಾರವಾರ.

Scanned with CamScanner